ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 12–01–2021

# ಪತ್ರಿಕಾ ಪ್ರಕಟಣೆ

## ರಾಜಭವನದಲ್ಲಿ ಸ್ವಾಮಿ ವಿವೇಕಾನಂದ ಭವನ ಉದ್ಘಾಟನೆ

**ಬೆಂಗಳೂರು, ಜನವರಿ 12 (ಕರ್ನಾಟಕ ವಾರ್ತೆ):**

ಸ್ವಾಮಿ ವಿವೇಕಾನಂದರ 158 ನೇ ಜನ್ಮದಿನಾಚರಣೆ ಪ್ರಯುಕ್ತ ರಾಜಭವನದ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ಸ್ವಾಮಿ ವಿವೇಕಾನಂದ ಭವನವನ್ನು ರಾಜಪಾಲ ವಜೂಭಾಯಿ ವಾಲಾ ಹಾಗೂ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರುಗಳು ಇಂದು ಉದ್ಘಾಟಿಸಿದರು.

ಇದೇ ಸಂದರ್ಭದಲ್ಲಿ ಸ್ವಾಮಿವಿವೇಕಾನಂದ ಭವನದ ಪ್ರತಿಮೆ ಅನಾವರಣ ಹಾಗೂ ರಾಜಭವನದಿಂದ ಹೊರತಂದಿರುವ ಕರ್ನಾಟಕ ಕುರಿತ **"A Visual Ode to Karnataka"** ಪುಸ್ತಕ ಬಿಡುಗಡೆಯನ್ನು ಸಹ ನೆರವೇರಿಸಲಾಯಿತು.

## ವಿವೇಕಾನಂದರ ಕನಸನ್ನು ಸಾಕಾರಗೊಳಿಸಲು ಉನ್ನತ ಶಿಕ್ಷಣ ವಲಯದಲ್ಲಿ ಬದಲಾವಣೆ : ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ

**ಬೆಂಗಳೂರು, ಜನವರಿ 12 (ಕರ್ನಾಟಕ ವಾರ್ತೆ) :** ಮನುಷ್ಯನ ವ್ಯಕ್ತಿತ್ವ ವಿಕಸನಕ್ಕೆ ಶಿಕ್ಷಣದ ಮಹತ್ವವನ್ನು ಸಾರಿದ ಸ್ವಾಮಿ ವಿವೇಕಾನಂದರ ಕನಸನ್ನು ಸಾಕಾರಗೊಳಿಸಲು ಸರ್ಕಾರ ಉನ್ನತ ಶಿಕ್ಷಣ ವಲಯದಲ್ಲಿ ದೂರದೃಷ್ಟಿ ಮೂಲಕ ನೂತನ ರಾಷ್ಟ್ರೀಯ ಶಿಕ್ಷಣ ನೀತಿ ತರಲಾಗಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದರು.

ಅವರು ಇಂದು ಉನ್ನತ ಶಿಕ್ಷಣ ಇಲಾಖೆ ಹಾಗೂ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯು ವಿಧಾನಸೌಧದ ಬ್ಯಾಂಕ್ವೆಂಟ್ ಹಾಲ್‌ನಲ್ಲಿ ಆಯೋಜಿಸಿದ್ದ ಸ್ವಾಮಿ ವಿವೇಕಾನಂದರ 158ನೇ ಜನ್ಮ ದಿನಾಚರಣೆಯಲ್ಲಿ

ವಿವೇಕಾನಂದರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಯುವಜನತೆ ರಾಜ್ಯದ ಮತ್ತು ದೇಶದ ಆಸ್ತಿಯಾಗಿದ್ದು, ಅವರು ಆರ್ಥಿಕವಾಗಿ, ಸಾಮಾಜಿಕವಾಗಿ ಅಭಿವೃದ್ಧಿ ಹೊಂದಲು ಗುಣಮಟ್ಟದ ಉನ್ನತ ಶಿಕ್ಷಣ ಅತ್ಯವಶ್ಯಕ ಎಂಬುದನ್ನು ನಮ್ಮ ಸರ್ಕಾರ ಮನಗೊಂಡಿದೆ. ಒಟ್ಟು ಜನಸಂಖ್ಯೆಯಲ್ಲಿ ಶೇ. 40 ರಷ್ಟು ಇರುವ ಯುವಜನತೆಯನ್ನು ರಾಷ್ಟ್ರ ನಿರ್ಮಾಣ ಮತ್ತು ಸಕಾರಾತ್ಮಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಸರ್ಕಾರ ಅವಕಾಶ ಕಲ್ಪಿಸಿಕೊಡುವ ಜೊತೆಗೆ, ಕೌಶಲ್ಯ ಅಭಿವೃದ್ಧಿ ಬಗ್ಗೆ ಅರಿವು ಮೂಡಿಸಲು ಶಿಕ್ಷಣ ಕೇತ್ರದಲ್ಲಿ ಹೆಚ್ಚಿನ ಸುಧಾರಣೆ ಸಹ ತರಲಾಗಿದೆ ಎಂದರು.

ಸ್ವಾಮಿ ವಿವೇಕಾನಂದರು ಪ್ರಸಿದ್ಧ ತತ್ವಜ್ಞಾನಿ ಹಾಗೂ ಆಧ್ಯಾತ್ಮಕ ಚಿಂತಕರಾಗಿದ್ದು ಅವರ ಚಿಂತನೆಗಳು ಸದಾ ನಮಗೆ ಸ್ಫೂರ್ತಿ. ಶಿಕ್ಷಣವೆಂದರೆ ವ್ಯಕ್ತಿತ್ವ ನಿರ್ಮಾಣ. ವ್ಯಕ್ತಿತ್ವ ನಿರ್ಮಾಣದ ಮೂಲಕ ಚಾರಿತ್ರ್ಯ ನಿರ್ಮಾಣ. ಚಾರಿತ್ರ್ಯ ನಿರ್ಮಾಣದಿಂದ ಮಾತ್ರವೇ ರಾಷ್ಟ್ರ ನಿಮಾಣ ಸಾಧ್ಯ ಎಂಬುದು ವಿವೇಕಾನಂದರ ಸ್ಪಷ್ಟವಾದ ಅಭಿಪ್ರಾಯವಾಗಿತ್ತು.

ಪ್ರಧಾನಮಂತ್ರಿ ನರೇಂದ್ರ ಮೋದಿಯುವರು ಯುವ ಪೀಳಿಗೆ ಬಗ್ಗೆ ಬಹಳ ಮಹತ್ತರವಾದ ಒಲವನ್ನು ಇಟ್ಟುಕೊಂಡಿದ್ದು, ಈ ದೇಶ ಜಗತ್ತಿನಲ್ಲೆ ಅಗ್ರಸ್ಥಾನದಲ್ಲಿ ನಿಲ್ಲಬೇಕಾದರೆ ವಿವೇಕಾನಂದರ ಚಿಂತನೆಗಳ ಸಕಾರ ಮುಖ್ಯ. ಅಲ್ಲದೆ, ಸುಶಿಕ್ಷಿತ, ಸಮರ್ಥ ಮತ್ತು ಸಮೃದ್ಧ ಭಾರತ ನಿರ್ಮಾಣಕ್ಕೆ ನೂತನ ರಾಷ್ಟ್ರೀಯ ನೀತಿಯನ್ನು ಕೇಂದ್ರ ಸರ್ಕಾರ ಜಾರಿಗೊಳಿಸಿದೆ.

ಉನ್ನತ, ಉತ್ತಮ ಗುಣಮಟ್ಟ ಹಾಗೂ ಮೌಲ್ಯಾಧಾರಿತ ಶಿಕ್ಷಣಕ್ಕೆ ಸರ್ಕಾರ ಹೆಚ್ಚಿನ ಆದ್ಯತೆ ನೀಡಿದ್ದು, ಈ ನಿಟ್ಟಿನಲ್ಲಿ ರಾಜ್ಯದ ಶಿಕ್ಷಣ ವ್ಯವಸ್ಥೆಗೆ ಹೊಸ ದಿಕ್ಕು ನೀಡಲಿರುವ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದರು.

ಆಲೋಚನಾ ಶಕ್ತಿ, ಜ್ಞಾನ, ಕೌಶಲ್ಯಭಿವೃದ್ಧಿಯ ಬಗ್ಗೆ ಯುವಕರಿಗೆ ಅರಿವು ಮೂಡಿಸಲು ಶಿಕ್ಷಣ ಕ್ಷೇತ್ರದಲ್ಲಿ ಹೆಚ್ಚಿನ ಸುಧಾರಣೆ ತರಲಾಗುತ್ತಿದೆ. ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜು, ಸ್ನಾತಕೋತ್ತರ ಹಾಗೂ ಪಾಲಿಟೆಕ್ನಿಕ್ ಕಾಲೇಜುಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು 430 ಕೋಟಿಗಳನ್ನು ಒದಗಿಸಲಾಗಿದೆ ಎಂದರು.

ಸ್ತ್ರೀಯರ ಸ್ಥಿತಿಗತಿ ಸುಧಾರಿಸದೆ ದೇಶದ ಉನ್ನತಿ ಸಾಧ್ಯವಿಲ್ಲವೆಂದು ಮಹಿಳಾ ಸಬಲೀಕರಣವನ್ನು ಅಂದೇ ವಿವೇಕಾನಂದರು ಪ್ರತಿಪಾದಿಸಿದ್ದರು. ಎಲ್ಲಾ ಸರ್ಕಾರಿ ಪದವಿಪೂರ್ವ, ಸ್ನಾತಕೋತ್ತರ ಪದವಿಗಳಿಗೆ ಪ್ರವೇಶ ಪಡೆಯುವ ಎಲ್ಲಾ ಹೆಣ್ಣು ಮಕ್ಕಳಿಗೆ ಸಂಪೂರ್ಣ ಶುಲ್ಕ ವಿನಾಯಿತಿ ಕ್ರಮಕೈಗೊಳ್ಳಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಯುವಸಾಧಕರನ್ನು, ವಿಶ್ವ ವಿದ್ಯಾನಿಲಯದಲ್ಲಿ ಅತ್ಯುತ್ತಮ ಅಂಕಗಳಿಸಿದ ವಿದ್ಯಾರ್ಥಿಗಳನ್ನು ಹಾಗೂ ಡೊಳ್ಳುಕುಣಿತದ ಡೊಳ್ಳುಚಂದ್ರುವನ್ನು ಸನ್ಮಾನಿಸಿದರು.

ಉಪಮುಖ್ಯಮಂತ್ರಿ ಡಾ. ಸಿ. ಎನ್. ಅಶ್ವತ್ಥ್‌ನಾರಾಯಣ ಮಾತನಾಡಿ, ಸ್ವಾಮಿ ವಿವೇಕಾನಂದರ ಗೌರವಾರ್ಥ ರಾಷ್ಟ್ರೀಯ ಯುವಕರ ದಿನಾಚರನೆಯನ್ನು ಇಡೀ ವಿಶ್ವದಲ್ಲಿ ಆಚರಿಸಲಾಗುತ್ತದೆ. ಯಾರೂ

ಅಸಹಾಯಕರಲ್ಲ. ಎಲ್ಲರಲ್ಲೂ ಪ್ರತಿಭೆ –ಶಕ್ತಿ ಇದೆ ಎಂಬ ಅರಿವು ಮೂಡಿಸಿ ಯುವಕರ ಏಳಿಗೆ –ಸಬಲೀಕರಣಕ್ಕೆ ಶ್ರಮಿಸಿದವರು ಸ್ವಾಮಿ ವಿವೇಕಾನಂದರು ಎಂದರು.

ಶಿಕ್ಷಣ ಮತ್ತು ಕೌಶಲ್ಯತೆ ಇದ್ದರೆ ಉತ್ತಮ ಭವಿಷ್ಯ ನಿರ್ಮಾಣ ಸಾಧ್ಯ. ನಮ್ಮ ಸಮಾಜ ಸುಧಾರಣೆಯಾಗಬೇಕಾದರೆ ಗುಣಮಟ್ಟದ ಶಿಕ್ಷಣದ ಅವಶ್ಯಕತೆ ಇದೆ. ಕಲಿಕಾ ನಿರ್ವಹಣಾ ವ್ಯವಸ್ಥೆಯನ್ನು ಸಮಗ್ರ ರೂಪದಲ್ಲಿ ಅನುಷ್ಠಾನಗೊಳಿಸುತ್ತಿರುವ ಮೊದಲ ರಾಜ್ಯ ನಮ್ಮದಾಗಿದೆ ಎಂದ ಅವರು, ಇತ್ತೀಚೆಗೆ ಬಂದಿರುವ ರಾಷ್ಟ್ರೀಯ ಶಿಕ್ಷಣ ನೀತಿ ಬಹಳ ಅದ್ಭುತವಾಗಿದ್ದು ಎಲ್ಲಾ ರೀತಿಯ ಅನುಕೂಲಗಳನ್ನು ಒಳಗೊಂಡಿದೆ ಎಂದರು.

ಕಾರ್ಯಕ್ರಮದಲ್ಲಿ ಉನ್ನತ ಶಿಕ್ಷಣ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಕುಮಾರ್ ನಾಯಕ್ ಐಟಿ ಬಿಟಿಯ ಅಪರ ಮುಖ್ಯ ಕಾರ್ಯದರ್ಶಿ ರಮಣರೆಡ್ಡಿ, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಆಯುಕ್ತರಾದ ಪ್ರದೇಪ್.ಪಿ ಉನ್ನತ ಶಿಕ್ಷಣ ಸಂಘದ ಉಪಾಧ್ಯಕ್ಷ ಪ್ರೊ. ತಿಮ್ಮೇಗೌಡ, ಬೆಂಗಳೂರು ವಿಶ್ವವಿದ್ಯಾನಿಲಯದ ಉಪಕುಲಪತಿ ಡಾ.ವೇಣುಗೋಪಾಲ್. ಕೆ.ಆರ್ ಹಾಗೂ ಇತರ ಗಣ್ಯರು ಉಪಸ್ಥಿತರಿದ್ದರು.

## ಬಿಬಿಎಂಪಿ ಸ್ಕೌಟ್ ಮತ್ತು ಗೈಡ್ಸ್ ಭವನ ಉದ್ಘಾಟನೆ

**ಬೆಂಗಳೂರು, ಡಿಸೆಂಬರ್ 12 (ಕರ್ನಾಟಕ ವಾರ್ತೆ):**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ನಿರ್ಮಿಸಿರುವ ಬಿಬಿಎಂಪಿ ಸ್ಕೌಟ್ ಮತ್ತು ಗೈಡ್ಸ್ ಭವನವನ್ನು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿದರು.

ಇಂದು ಅರಮನೆ ರಸ್ತೆಯ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ನಲ್ಲಿ ಹಮ್ಮಿಕೊಳ್ಳಲಾದ ಈ ಕಾರ್ಯಕ್ರಮದಲ್ಲಿ ಬಿಬಿಎಂಪಿಯ ಆಯುಕ್ತರಾದ ಎನ್.ಮಂಜುನಾಥ್ ಪ್ರಸಾದ್, ಆಡಳಿತಾಧಿಕಾರಿ ಗೌರವ್ ಗುಪ್ತಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ನ ಉಪಾಧ್ಯಕ್ಷರಾದ ಕೊಂಡಜ್ಜಿ ಬ. ಷಣ್ಮುಖಪ್ಪ ಉಪಸ್ಥಿತರಿದ್ದರು.

ಸ್ವಾಮಿ ವಿವೇಕಾನಂದರ ವಿಚಾರಧಾರೆಗಳನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಿ: ಪಿಜಿಆರ್ ಸಿಂಧ್ಯಾ

**ಬೆಂಗಳೂರು, ಡಿಸೆಂಬರ್ 12 (ಕರ್ನಾಟಕ ವಾರ್ತೆ):**

ಸ್ವಾಮಿ ವಿವೇಕಾನಂದರ 158ನೇ ಜಯಂತಿಯ ದಿನ ಮುಖ್ಯಮಂತ್ರಿಗಳು ಬಿಬಿಎಂಪಿ ಸ್ಕೌಟ್ ಮತ್ತು ಗೈಡ್ಸ್ ಭವನವನ್ನು ಉದ್ಘಾಟಿಸಿರುವುದು ಸಂತೋಷವಾಗಿದೆ. ವಿವೇಕಾನಂದರ ವಿಚಾರಧಾರೆಗಳನ್ನು ನಮ್ಮ ಜೀವನದಲ್ಲಿ

ಅಳವಡಿಸಲು ನಿರ್ಧಾರ ಮಾಡುವುದು ಮುಖ್ಯವಾಗಿದೆ ಎಂದು ಭಾರತ್ ಸ್ಕೌಟ್ ಮತ್ತು ಗೈಡ್ಸ್, ರಾಜ್ಯದ ಮುಖ್ಯ ಆಯುಕ್ತರಾದ ಪಿ.ಜಿ.ಆರ್. ಸಿಂಧ್ಯ ಅವರು ತಿಳಿಸಿದರು

ಇಂದು ಕೊಂಡಜ್ಜಿ ಬಸಪ್ಪ ಸಭಾಂಗಣದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸ್ವಾಮಿ ವಿವೇಕಾನಂದರ 158ನೇ ಜಯಂತಿ ಹಾಗೂ ರಾಷ್ಟ್ರೀಯ ಯುವ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸ್ವಾಮಿ ವಿವೇಕನಂದರ 39ವರ್ಷದ ಜೀವಿತ ಕಾಲವು ಸಾರ್ಥಕವಾಯಿತು. ಚಿಕಾಗೋನಲ್ಲಿ ನಡೆದ ಸರ್ವಧರ್ಮ ಸಮ್ಮೇಳನದಲ್ಲಿ ಆತ್ಮೀಯ ಸಹೋದರ, ಸಹೋದರರೆ ಎಂದು ಸಂಬೋಧಿಸಿ ಭಾರತ ದೇಶಕ್ಕೆ ಕೀರ್ತಿ ತಂದರು. ಭಾರತ ದೇಶದ ಸಂಸ್ಕೃತಿ, ಆಧ್ಯಾತ್ಮಿಕತೆಯನ್ನು ವಿದೇಶದಲ್ಲಿ ಹರಡಿದ ಕೀರ್ತಿ ವಿವೇಕನಂದರಿಗೆ ಸಲ್ಲುತ್ತದೆ. ವಿವೇಕಾನಂದರು ಯಾರನ್ನು ದ್ವೇಷಿಸದೆ ಎಲ್ಲರನ್ನು ಪ್ರೀತಿಸುತ್ತಿದ್ದರು. ಮಾನವ ಧರ್ಮವನ್ನು ಎಲ್ಲೆಡೆ ಸಾರಿದರು. ವಿವೇಕಾನಂದರು ಎಲ್ಲರಿಗೂ ಆದರ್ಶ ವ್ಯಕ್ತಿ ಆಗಿದ್ದಾರೆ ಎಂದರು.

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ವತಿಯಿಂದ ಎಲ್ಲಾ ವಿದ್ಯಾರ್ಥಿಗಳೂ ಪರಿಸ್ಥಿತಿಗೆ ಅನುಗುಣವಾಗಿ ಹೊಂದಿಕೊಳ್ಳುವ ಗುಣವನ್ನು ಕಲಿಯುತ್ತಿದ್ದಾರೆ. ವಿದ್ಯಾರ್ಥಿಗಳು ದೈಹಿಕವಾಗಿ, ಭೌತಿಕವಾಗಿ, ಸಾಮಾಜಿಕವಾಗಿ, ಆಧ್ಯಾತ್ಮಿಕವಾಗಿ ಮತ್ತು ಉದ್ದೇಶಪೂರ್ವ ವಿಹಾರ-ವಿನೋದಗಳ ಮೂಲಕ ತಮ್ಮ ಉದ್ದೇಶವನ್ನು ಸಾಧಿಸುತ್ತಾರೆ ಎಂದು ತಿಳಿಸಿದರು.

ವಿದ್ಯಾರ್ಥಿಗಳಲ್ಲಿ ಕ್ರಿಯಾಶೀಲ ಪಾಲ್ಗೊಳ್ಳುವಿಕೆ, ನಾಯಕತ್ವ, ಸಮಾಜಸೇವೆ, ಗುಂಪುಕುಶಲತೆ, ವೈಯಕ್ತಿಕ ಹೊಣೆಗಾರಿಕೆ, ಸರಳತೆ, ಸೃಜನಶಿಲತೆ, ಸಹಾಸ ಹಾಗೂ ಸವಾಲುಗಳನ್ನು ಒದಗಿಸುವ ಒಂದು ಸಮೃದ್ಧ ಕಲಿಕೆಯನ್ನು ಒದಗಿಸುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಕೋವಿಡ್-19ರ ವಾರಿಯರ್ಸ್ ಬಿಬಿಎಂಪಿ ಸ್ಕೌಟ್ಸ್ ಮತ್ತು ಗೈಡ್ಸ್ ದಳನಾಯಕರಿಗೆ ಭಾರತ್‌ಸ್ಕೌಟ್ ಮತ್ತು ಗೈಡ್ಸ್ ಬಿಬಿಎಂಪಿ ಜಿಲ್ಲಾ ಸಂಸ್ಥೆ ಸನ್ಮಾನಿಸಿತು.

ಕಾರ್ಯಕ್ರಮದಲ್ಲಿ ಬಿಬಿಎಂಪಿ ಆಡಳಿತಾಧಿಕಾರಿಗಳಾದ ಗೌರವ್ ಗುಪ್ತ, ಬಿಬಿಎಂಪಿಯ ತ್ಯಾಜ್ಯ ನಿರ್ವಹಣೆಯ ವಿಶೇಷ ಆಯುಕ್ತರಾದ ರಣದೀಪ್.ಡಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ನ ಉಪಾಧ್ಯಕ್ಷರಾದ ಕೊಂಡಜ್ಜಿ ಬ. ಷಣ್ಮುಖಪ್ಪ, ಜಿಲ್ಲಾ ಕಾರ್ಯದರ್ಶಿಗಳು ಮತ್ತು ಜಂಟಿ ಆಯುಕ್ತರು(ಪೂರ್ವ) ಆದ ಕೆ.ಆರ್. ಪಲ್ಲವಿ, ಜಿಲ್ಲಾ ಖಜಾಂಚಿ ಮತ್ತು ಹಣಕಾಸು ಉಪ ನಿಯಂತ್ರಕರಾದ ಬಿ.ಆರ್. ಶಶಿಧರ್ ಅವರು ಉಪಸ್ಥಿತರಿದ್ದರು.

## ಪ್ರಧಾನಮಂತ್ರಿ ಬೀದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ ಸಮೀಕ್ಷೆ

ಬೆಂಗಳೂರು, ಜನವರಿ 12 (ಕರ್ನಾಟಕ ವಾರ್ತೆ):

ಪ್ರಧಾನಮಂತ್ರಿ ಬೀದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ ಯೋಜನೆಯಡಿ ಗುರುತಿಸಲ್ಪಟ್ಟ ಬೀದಿ ವ್ಯಾಪಾರಸ್ಥರ ಕುಟುಂಬಗಳ ಸಮಗ್ರ ಅಭಿವೃದ್ಧಿಗಾಗಿ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆಯನ್ನು ಆಯ್ದ ನಗರಗಳಲ್ಲಿ ಕೈಗೊಳ್ಳಲಾಗುತ್ತಿದ್ದು ಅದರಲ್ಲಿ, ಮೈಸೂರು, ದಾವಣಗೆರೆ, ತುಮಕೂರು, ಬಳ್ಳಾರಿ, ಹುಬ್ಬಳ್ಳಿ–ಧಾರವಾಡ, ಬೆಳಗಾವಿ, ಗದಗ–ಬೆಟಗೇರಿ ಮಹಾನಗರ ಪಾಲಿಕೆಗಳನ್ನು ಆಯ್ಕೆ ಮಾಡಲಾಗಿದೆ.

ಈ ಯೋಜನೆಯಿಂದ ಪಿಎಂ ಸ್ವನಿಧಿಯ ಫಲಾನುಭವಿಗಳು ಮತ್ತು ಅವರ ಕುಟುಂಬದ ಸಾಮಾಜಿಕ ಮತ್ತು ಆರ್ಥಿಕ ವಿವರಗಳನ್ನು ಸಂಗ್ರಹಿಸಲಾಗುವುದು. ಅರ್ಹತೆ ಹೊಂದಿದ ಫಲಾನುಭವಿಗಳು ಕಲ್ಯಾಣ ಯೋಜನೆಗಳು ಮತ್ತು ಸದರಿ ಯೋಜನೆಗಳ ಸೌಲಭ್ಯಗಳನ್ನು ಪಡೆಯಲು ಸಂಪರ್ಕ ಸಾಧಿಸುವುದು. ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆಯಿಂದ ಸಂಬಂಧಪಟ್ಟ ರಾಜ್ಯಗಳು ಸಹ ರಾಜ್ಯ,ಮಟ್ಟದ ಕಲ್ಯಾಣ ಯೋಜೆನಗಳು ಮತ್ತು ಸೌಲಭ್ಯಗಳನ್ನು ಪಿಎಂ ಸ್ವನಿಧಿ ಫಲಾನುಭವಿಗಳಿಗೆ ಮತ್ತು ಅವರ ಕುಟುಂಬಗಳಿಗೆ ವಿಸ್ತರಿಸುವುದು ಸೇರಿರುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅರ್ಜಿ ಆಹ್ವಾನ

**ಬೆಂಗಳೂರು, ಜನವರಿ 12 (ಕರ್ನಾಟಕ ವಾರ್ತೆ):**

ಸ್ಟಾಫ್ ಸೆಲೆಕ್ಷನ್ ಕಮೀಷನ್ /ಸಿಬ್ಬಂದಿ ನೇಮಕಾತಿ ಆಯೋಗ(ಕೆ.ಕೆ.ಆರ್.) ಕೇಂದ್ರ ಸರ್ಕಾರದಿಂದ ಪದವಿ ಹಂತದ ಸಂಯುಕ್ತ ಪರೀಕ್ಷೆ ಬಿ ಮತ್ತು ಸಿ ಗ್ರೂಫ್ ನ 6506 ಹುದ್ದೆಗಳ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಿದೆ. ಹೆಚ್ಚಿನ ಮಾಹಿತಿಗೆ www.ssckkr.kar.nic and https://ssc.nic.in ಸಂಪಕಿಸುವುದು.

## ದ್ವಿತೀಯ ಅಧಿವೇಶನದ ಇಲಾಖಾ ಪರೀಕ್ಷೆಗಳಿಗೆ ಅರ್ಜಿ ಆಹ್ವಾನ

**ಬೆಂಗಳೂರು, ಜನವರಿ 12 (ಕರ್ನಾಟಕ ವಾರ್ತೆ):**

ಲೋಕ ಸೇವಾ ಆಯೋಗವು ನಡೆಸಲಿರುವ 2020 ನೇ ಸಾಲಿನ ದ್ವಿತೀಯ ಅಧಿವೇಶನದ ಇಲಾಖಾ ಪರೀಕ್ಷೆಗಳಿಗೆ ಅರ್ಹ ಸರ್ಕಾರಿ/ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳ ನೌಕರರಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಅರ್ಹ ಅಭ್ಯರ್ಥಿಗಳು ದಿನಾಂಕ: 20-01-2021 ರಿಂದ 20-02-2020 (ರಾತ್ರಿ 11:45 ಗಂಟೆಯೊಳಗೆ) ರವರೆಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದ್ದು, ಶುಲ್ಕವನ್ನು ಆನ್ ಲೈನ್ ಮೂಲಕವೇ ಪಾವತಿಸಬೇಕಾಗಿರುತ್ತದೆ.**

**ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ಅಧಿಸೂಚನೆಯನ್ನು ನೋಡಬಹುದಾಗಿದೆ ಹಾಗೂ ಅರ್ಜಿಗಳನ್ನು ಸಲ್ಲಿಸುವ ಹಂತದಲ್ಲಿ ತಾಂತ್ರಕ ಸಮಸ್ಯೆ ಉಂಟಾದಲ್ಲಿ ಸೇವಾ ಸಿಂಧುವಿನ ಸಹಾಯವಾಣಿ ಸಂಖ್ಯೆ: 080-22279954, 8088304855 ಮತ್ತು 6361799796 ಗಳನ್ನು ಸಂಪರ್ಕಿಸಿ ಮಾಹಿತಿ ಪಡೆಯಲು ಅಧಿಕೃತ ಪ್ರಕಟಣೆ ತಿಳಿಸಿದೆ.**

## ಸಚಿವರ ಪ್ರವಾಸ

**ಬೆಂಗಳೂರು, ಜನವರಿ 12 (ಕರ್ನಾಟಕ ವಾರ್ತೆ):**

**ವಸತಿ ಸಚಿವ ವಿ. ಸೋಮಣ್ಣ ಅವರು ಜನವರಿ 17 ರಂದು ಬೆಳಗಾವಿಗೆ ಪ್ರವಾಸಕೈಗೊಂಡು ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

# ಬೆಂಗಳೂರು ವಿಭಾಗದ ಕನ್ನಡ ಮಾಧ್ಯಮ ಪ್ರಶಸ್ತಿ 2020-21

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಪ್ರತಿಷ್ಠಿತ ಕಾರ್ಯಕ್ರಮಗಳಲ್ಲಿ ಕನ್ನಡ ಮಾಧ್ಯಮ ಪ್ರಶಸ್ತಿ ಕಾರ್ಯಕ್ರಮವೂ ಒಂದು. ರಾಜ್ಯದಲ್ಲಿ ಕನ್ನಡ ಮಾಧ್ಯಮದಲ್ಲಿ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಯನ್ನು ವ್ಯಾಸಂಗ ಮಾಡಿ, ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ ಈ ಕಾರ್ಯಕ್ರಮವನ್ನು ಕಳೆದ ಹತ್ತು ವರ್ಷಗಳಿಂದ ನಡೆಸುತ್ತಾ ಬಂದಿದೆ. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ತುಂಬಿ, ಕನ್ನಡ ಮಾಧ್ಯಮ ಶಿಕ್ಷಣವನ್ನು ಉತ್ತೇಜಿಸುವ ಉದ್ದೇಶದ ಹಿನ್ನೆಲೆಯಲ್ಲಿ ಬೆಂಗಳೂರು ವಿಭಾಗದ ಕನ್ನಡ ಮಾಧ್ಯಮ ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ಇಂದು ಬೆಳಗ್ಗೆ 10.30 ಗಂಟೆಗೆ ಆನ್ ಲೈನ್(ವರ್ಚುವಲ್)ಮೂಲಕ ಆಯೋಜಿಸಿ ಯಶಸ್ವಿಗೊಳಿಸಲಾಯಿತು.

2020-21ರ ಕನ್ನಡ ಮಾಧ್ಯಮ ಪ್ರಶಸ್ತಿ ಕಾರ್ಯಕ್ರಮದಲ್ಲಿ ತಾಲ್ಲೂಕು ಮಟ್ಟದಲ್ಲಿ ಅತಿ ಹೆಚ್ಚು ಅಂಕಗಳಿಸಿದ ಎಸ್.ಎಸ್.ಎಲ್.ಸಿ.ಯ 695 ವಿದ್ಯಾರ್ಥಿಗಳು ಮತ್ತು ಪಿ.ಯು.ಸಿ.ಯ 570 ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 1265 ವಿದ್ಯಾರ್ಥಿಗಳನ್ನು ಗೌರವಿಸಿ, ಪುರಸ್ಕರಿಸಲಾಗುತ್ತಿದೆ. ಬೆಂಗಳೂರು ವಿಭಾಗದ ಪ್ರತಿ ತಾಲೂಕಿನಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಮೂರು ವಿದ್ಯಾಥಿಗಳಂತೆ ಎಸ್.ಎಸ್.ಎಲ್.ಸಿ.ಯ 195 ಹಾಗೂ ಪಿ.ಯು.ಸಿ.ಯ 158 ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 353 ವಿದ್ಯಾರ್ಥಿಗಳು ಆಯ್ಕೆಯಾಗಿದ್ದು, 300 ಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಮತ್ತು ಪೋಷಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು, ಈ ಪುರಸ್ಕಾರದ ಮೊತ್ತವನ್ನು ನೇರ ನಗದು ವರ್ಗಾವಣೆ (ಡಿ.ಬಿ.ಟಿ) ಯ ಮೂಲಕ ವಿದ್ಯಾರ್ಥಿಯ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುವುದು. ಪುರಸ್ಕಾರದ ಮೊತ್ತಗಳು ಹೀಗಿವೆ, ಪ್ರಥಮ ನಗದು ಬಹುಮಾನ 12,000/-, ದ್ವಿತೀಯ ಬಹುಮಾನ 11,000/-, ತೃತೀಯ ಬಹುಮಾನ 10,000/-ಗಳು. ಎಲ್ಲಾ ವಿಜೇತ ವಿದ್ಯಾರ್ಥಿಗಳ ಪ್ರಾಧಿಕಾರದ ವತಿಯಿಂದ ನೀಡುವ ಇ- ಪ್ರಶಸ್ತಿ ಪ್ರಮಾಣ ಪತ್ರಗಳು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧಿಕೃತ ಜಾಲತಾಣದಲ್ಲಿ (ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧಿಕೃತ ಜಾಲತಾಣ https://kannadapraadhikaara.karnataka.gov.in/ ) ಲಭ್ಯವಿರುತ್ತವೆ. ಇಂದಿನ ಸಂಪೂರ್ಣ ಪ್ರಶಸ್ತಿ ಪ್ರಧಾನ ಕಾರ್ಯಕ್ರಮವನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧಿಕೃತ ಫೇಸ್‌ಬುಕ್ ಪುಟದ ಲೈವ್‌ನಲ್ಲಿ ವೀಕ್ಷಿಸಬಹುದಿದೆ(https://www.facebook.com/kannadadevelopmentauthority),

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾನ್ಯ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಶ್ರೀ ಟಿ.ಎಸ್. ನಾಗಾಭರಣ ರವರು ವಹಿಸಿದ್ದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳಾದ ಶ್ರೀ ಡಾ: ಕೆ ಮುರಳೀಧರ ರವರು ಪ್ರಾಸ್ತಾವಿಕ ನುಡಿಗಳನ್ನಾಡಿ ಕಾರ್ಯಕ್ರಮ ನಡೆಸಿಕೊಟ್ಟರು.ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಶ್ರೀ ಪ್ರೊ..ಅಬ್ದುಲ್ ರೆಹಮಾನ್ ಪಾಷ,ಶ್ರೀ ರೋಹಿತ್ ಚಕ್ರತೀರ್ಥ,ಡಾ.ಸಿ.ಎ ಕಿಶೋರ್ ರವರುಗಳು ಮುಖ್ಯ ಅಥಿತಿಗಳಾಗಿ ಭಾಗವಹಿಸಿದ್ದರು.

# ಧಾರವಾಡ ವಿವಿಯಿಂದ ಅಭಿನಂದನ್.ಎನ್. ಅವರಿಗೆ ಪಿ.ಹೆಚ್.ಡಿ ಪದವಿ

**ಬೆಂಗಳೂರು, ಜನವರಿ 12 (ಕರ್ನಾಟಕ ವಾರ್ತೆ):**

ಬೆಂಗಳೂರಿನ ಮಹಾರಾಣಿ ಲಕ್ಷ್ಮಿ ಅಮ್ಮಣ್ಣಿ ಮಹಿಳಾ ಕಾಲೇಜಿನಲ್ಲಿ(ಸ್ವಾಯತ್ತ) ವಾಣಿಜ್ಯ ವಿಭಾಗದ ಸಹ ಪ್ರಾಧ್ಯಾಪಕರಾಗಿ ಕಾರ್ಯ ನಿರ್ವಹಿಸುತ್ತಿರುವ ಅಭಿನಂದನ್.ಎನ್. ಅವರು, "ಆ್ಯನ್ ಇವ್ಯಾಲ್ಯುಯೇಷನ್ ಆಫ್ ಮೈಕ್ರೊ-ಫೈನಾನ್ಸ್ ಇನ್ ಮೈಕ್ರೊ ಸ್ಮಾಲ್ ಎಂಟರ್‌ಪ್ರೈಸಸ್ ವಿಥ್ ಸ್ಪೆಷಲ್ ರೆಫರೆನ್ಸ್ ಟು ಧಾರವಾಡ ಡಿಸ್ಟ್ರಿಕ್ಟ್ ಇನ್ ಕರ್ನಾಟಕ'' ಎಂಬ ವಿಷಯದ ಕುರಿತು ಮಂಡಿಸಿದ ಮಹಾಪ್ರಬಂಧಕ್ಕೆ ಧಾರವಾಡ ವಿಶ್ವವಿದ್ಯಾನಿಲಯವು ಪಿ.ಹೆಚ್.ಡಿ ಪದವಿಯನ್ನು ನೀಡಿ ಗೌರವಿಸಿದೆ.

ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಕೌಸಾಳಿ ವ್ಯವಹಾರ ಅಧ್ಯಯನ ವಿಭಾಗದ ಪ್ರಾಧ್ಯಾಪಕರಾದ ಡಾ. ಎ.ಎಂ.ಕಡಕೋಳ ಅವರ ಮಾರ್ಗದರ್ಶನದಲ್ಲಿ ಅಭಿನಂದನ್.ಎನ್. ಅವರು ಸಂಶೋಧನೆ ನಡೆಸಿ ಮಹಾಪ್ರಬಂಧವನ್ನು ಸಿದ್ಧಪಡಿಸಿದ್ದಾರೆ ಎಂದು ಧಾರವಾಡ ವಿಶ್ವವಿದ್ಯಾನಿಲಯದ ಕುಲಸಚಿವರು(ಮೌಲ್ಯಮಾಪನ) ತಿಳಿಸಿದ್ದಾರೆ.

## Karnataka State Pollution Control Board
## Parisara Bhavan, Bengaluru
## AQI of the CAAQM stations established in Bengaluru City
## Date : 12.1.2021

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 72 | Satisfactory | $PM_{10}$ |
| 2 | Jayanagar 5th Block, Shalini ground | 85 | Satisfactory | $PM_{10}$ |
| 3 | KAVIKA, Mysore Road | 92 | Satisfactory | $PM_{10}$ |
| 4 | Rajeev Gandhi Institute of Chest Disease, NIMHANS, Hombegowda Nagar | 53 | Satisfactory | $PM_{10}$ |

| | | | | |
|---|---|---|---|---|
| 5 | HSR Layout, near Central Silkboard | 69 | Satisfactory | $PM_{10}$ |
| 6 | City Railway Station, Magestic, Bengaluru | 92 | Satisfactory | $PM_{10}$ |
| 7 | Saneguruvanahalli, Nisarga Bhavan, KSPCB, Shivanagara | 35 | Good | $PM_{10}$ |
| 8 | BWSSB, Kadabesanahalli | 37 | Good | $PM_{2.5}$ |
| 9 | Peenya | 67 | Satisfactory | $PM_{2.5}$ |
| 10 | BTM Layout | 38 | Good | CO |

| **Category (Range)** | **Possible Health Impacts** | **Category (Range)** | **Possible Health Impacts** |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |

## ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ
## ಪರಿಸರ ಭವನ, ಬೆಂಗಳೂರು.

### ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೇಕ್ಷಕ ವಾಯು ಗುಣಮಟ್ಟ ಮಾಪನ ಕೇಂದ್ರಗಳ ವಾಯು ಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು

**ದಿನಾಂಕ: 12.1.2021**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯು ಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯ ಕಾರಕ |
|---|---|---|---|---|

| | | | | |
|---|---|---|---|---|
| 1 | ಪಶುವೈದ್ಯಕೀಯ ಕಾಲೇಜು, ಹೆಬ್ಬಾಳ | 72 | ತೃಪ್ತಿಕರ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 85 | ತೃಪ್ತಿಕರ | $PM_{10}$ |
| 3 | ಕವಿಕ, ಮೈಸೂರು ರಸ್ತೆ | 92 | ತೃಪ್ತಿಕರ | $PM_{10}$ |
| 4 | ರಾಜೀವ್ ಗಾಂಧಿ ಎದೆ ರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 53 | ತೃಪ್ತಿಕರ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರ ರೇಷ್ಮೆ ಮಂಡಳಿ ಹತ್ತಿರ | 69 | ತೃಪ್ತಿಕರ | $PM_{10}$ |
| 6 | ನಗರ ರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 92 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 35 | ಉತ್ತಮ | $PM_{10}$ |
| 8 | BWSSB, ಕಾಡಬೀಸನಹಳ್ಳಿ | 37 | ಉತ್ತಮ | $PM_{2.5}$ |
| 9 | ಪೀಣ್ಯ | 67 | ತೃಪ್ತಿಕರ | $PM_{2.5}$ |
| 10 | ಬಿಟಿಎಂ ಲೇಔಟ್ | 38 | ಉತ್ತಮ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದ ಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯ ಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದ ಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತ ಜನರಿಗೂ ಉಸಿರಾಟದ ಅಸ್ವಸ್ಥತೆ |